# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002**

**ಪತ್ರಿಕಾ ಪ್ರಕಟಣೆ** **ದಿನಾಂಕ:06.08.2020**

## ಕೋವಿಡ್ ಆಸ್ಪತ್ರೆಗಳ ಹಾಸಿಗೆ ನಿರ್ವಹಣಾ ವ್ಯವಸ್ಥೆ ತಂತ್ರಾಂಶ ಹಾಗೂ ಕೋವಿಡ್ ಯು.ಪಿ.ಹೆಚ್.ಸಿ ತಂತ್ರಾಂಶ ಬಿಡುಗಡೆಗೊಳಿಸಿರುವ ಬಗ್ಗೆ:



ಸನ್ಮಾನ್ಯ ಉಪಮುಖ್ಯಮಂತ್ರಿಗಳು, ಪೂಜ್ಯ ಮಹಾಪೌರರು ರವರಿಂದ ಇಂದು ಪಾಲಿಕೆ ಕೇಂದ್ರ ಕಛೇರಿ ಸಭಾಂಗಣ-01ರಲ್ಲಿ ಕೋವಿಡ್ ಆಸ್ಪತ್ರೆಗಳ ಹಾಸಿಗೆ ನಿರ್ವಹಣಾ ವ್ಯವಸ್ಥೆ(Covid Hospital Bed Management System) ಹಾಗೂ ಕೋವಿಡ್ ಯು.ಪಿ.ಹೆಚ್.ಸಿ(Covid U.P.H.C)ತಂತ್ರಾಂಶ ಗಳನ್ನು ಬಿಡುಗಡೆಗೊಳಿಸಿದರು. ಸದರಿ ವೇಳೆ ಮಾನ್ಯ ಉಪಮಹಾಪೌರರು ಶ್ರೀ ರಾಮಮೋಹರಾಜು, ಮಾನ್ಯ ಆಡಳಿತ ಪಕ್ಷದ ನಾಯಕರು ಶ್ರೀ ಮುನೀಂದ್ರ ಕುಮಾರ್, ಮಾನ್ಯ ಆರೋಗ್ಯ ಸ್ಥಾಯಿ ಸಮಿತಿ ಅಧ್ಯಕ್ಷರು ಶ್ರೀ ಮಂಜುನಾಥ್ ರಾಜು.ಜಿ, ಮಾನ್ಯ ಆಯುಕ್ತರು ಶ್ರೀ ಮಂಜುನಾಥ್ ಪ್ರಸಾದ್, ಮಾನ್ಯ ವಿಶೇಷ ಆಯುಕ್ತರು(ಆರೋಗ್ಯ) ಶ್ರೀ ಡಿ.ರಂದೀಪ್, ಮುಖ್ಯ ಆರೋಗ್ಯಾಧಿಕಾರಿ ಡಾ. ವಿಜೇಂದ್ರ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೋವಿಡ್-19 ಸೋಂಕು ಹೆಚ್ಚಳವಾಗುತ್ತಿರುವ ಹಿನ್ನೆಲೆಯಲ್ಲಿ ಅದನ್ನು ತಡೆಗಟ್ಟಲು ಅನೇಕ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಈ ಸಂಬಂಧ ಎಲ್ಲಾ ಪ್ರಕರಣಗಳಿಗೆ ಸಂಬಂಧಿಸಿದ ವಿವಿಧ ಮಾಹಿತಿಗಳಾದ ಸಂಪರ್ಕಿತರ ಪತ್ತೆ ಹಚ್ಚುವಿಕೆ, ಕಂಟೈನ್‌ಮೆಂಟ್ ವಲಯದ ನಿರ್ವಹಣೆ, ಐ.ಎಲ್.ಐ. ಸಮೀಕ್ಷೆ, ಜ್ವರ ತಪಾಸಣಾ ಕೇಂದ್ರಗಳ ನಿರ್ವಹಣೆ, ಗಂಟಲು ದ್ರವ ಮಾದರಿ ಪರೀಕ್ಷೆ ಹಾಗೂ ಇತರೆ ಚಟುವಟಿಕೆಗಳ ನಿರ್ವಹಣೆ ವರಿದಿಯನ್ನು ಸಮಯಕ್ಕೆ ಸರಿಯಾಗಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಂದ ಪಡೆಯಲು ಹಾಗೂ ಸಮಗ್ರವಾದ ವರದಿಯನ್ನು ಪ್ರತಿನಿತ್ಯ ಪ್ರಚಾರ ಪಡಿಸಲು ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳ(U.P.H.C) ಹಂತದಲ್ಲಿ ತಂತ್ರಾಂಶವನ್ನು ಅಳವಡಿಸಿಕೊಂಡು, ಕೋವಿಡ್-19 ಹಾಗೂ ಇನ್ನಿತರೆ ಕಾಯಿಲೆಗಳಿಗೆ ಸಂಬಂಧಿಸಿದ ವರದಿಗಳನ್ನು ತಯಾರಿಸಲು CSR ಅಡಿಯಲ್ಲಿ ಯುನೈಟೆಡ್ ವೇ ಆಫ್ ಬೆಂಗಳೂರು ರವರು ವತಿಯಿಂದ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗಿರುತ್ತದೆ.

ಕೋವಿಡ್-19 ಧೃಡೀಕೃತ ಪ್ರಕರಣಗಳನ್ನು ಆಗಿಂದಾಗಲೇ ಆಸ್ಪತ್ರೆಗಳಿಗೆ ದಾಖಲಿಸಲು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಮುಖೇನಾ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ವಿವಿಧ ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳ, ಹಾಸಿಗೆಗಳನ್ನು ಕೇಂದ್ರ ಕಛೇರಿಯಲ್ಲಿ ಮತ್ತು ವಲಯ ಮಟ್ಟದಲ್ಲಿ ಸ್ಥಾಪಿಸಲಾಗಿರುವ ಜೋನಲ್ ಕಮಾಂಡ್ ಕೇಂದ್ರಗಳ ಮೂಲಕ ಹಂಚಿಕೆ ಮಾಡಿ, ರೋಗಿಗಳನ್ನು ತ್ವರಿತವಾಗಿ ಆಸ್ಪತ್ರೆಗಳಿಗೆ ದಾಖಲಿಸಲು ಕೋವಿಡ್ ಆಸ್ಪತ್ರೆಗಳ ಹಾಸಿಗೆ ನಿರ್ವಹಣಾ ವ್ಯವಸ್ಥೆ(Covid Hospital Bed Management System) ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗಿರುತ್ತದೆ.

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**